I/13022/2023

ಕರ್ನಾಟಕ ಸರ್ಕಾರ
Government of karnataka

ಡಿಎಸ್ಇಆರ್‌ಟಿ
DSERT

ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ
DEPARTMENT OF STATE EDUCATIONAL RESEARCH AND TRAINING
No 4, 100 FT RING ROAD, BANASHANKARI 3 RD STAGE BENGALURU - 560 085
Email: dpi.dsert-ka@nic.in Website: http://dsert.kar.nic.in

Phone - 080 26980100
Fax - 080 26422377

ಸಂಖ್ಯೆ: DSERT/EVG/ ಸಂಭ್ರಮ ಶನಿವಾರ/2022-23 E- 8146 ದಿನಾಂಕ:03-07-2023

## ಜ್ಞಾಪನ

ವಿಷಯ: **'ಸಂಭ್ರಮ ಶನಿವಾರ'** - ಶಾಲೆಗಳಲ್ಲಿ ಬ್ಯಾಗ್ ರಹಿತ ದಿನದ ಆಚರಣೆ ಕುರಿತು

ಉಲ್ಲೇಖ: 01. ಸರ್ಕಾರದ ಆದೇಶ ಸಂ: ಇಡಿ 107 ಯೋಯೋಕ 2017, ಬೆಂಗಳೂರು, ದಿನಾಂಕ: 03-05-2019

02. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ: E- 8146 DSERT/EVG/ ಸಂಭ್ರಮ ಶನಿವಾರ/2022-23 ದಿನಾಂಕ: 28-10-2022.

03. ಶ್ರೀ ಎಸ್ ಸುರೇಶ್ ಕುಮಾರ್, ಮಾನ್ಯ ಶಾಸಕರು ಹಾಗೂ ಮಾಜಿ ಸಚಿವರು ರಾಜಾಜಿನಗರ ವಿಧಾನಸಭಾ ಕ್ಷೇತ್ರ ರವರ ಪತ್ರ ಸಂಖ್ಯೆ: ಶಾಗೃಕ/ ರಾವಿಕ್ಷೇ/46/ 2023-24 ದಿನಾಂಕ: 26-06-2023

************

ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಮಕ್ಕಳಿಗೆ ಸಂತಸದಾಯಕ ಕಲಿಕೆಯನ್ನು ನೀಡಲು ಹಾಗೂ ಮಕ್ಕಳಿಗೆ ಪಠ್ಯವನ್ನು ಹೊರೆಯಾಗಿಸದೆ ಉಲ್ಲಾಸದಿಂದ ಕಲಿಯುವಂತೆ ಮಾಡುವ ಉದ್ದೇಶದಿಂದ ಪ್ರತಿ ತಿಂಗಳು ಒಂದು ಶನಿವಾರದಂದು ಬ್ಯಾಗ್ ರಹಿತ ದಿನವೆಂದು ಆಚರಿಸುವಂತೆ ಉಲ್ಲೇಖ-1 ರ ಪತ್ರದಲ್ಲಿ ಆದೇಶಿಸಲಾಗಿದ್ದು, 2023-24 ನೇ ಸಾಲಿನಲ್ಲಿ ಪ್ರತಿ ತಿಂಗಳು 3 ನೇ ಶನಿವಾರ ಶಾಲಾ ಹಂತದಲ್ಲಿ ಸದರಿ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ತಿಳಿಸಿದೆ.

ಮಕ್ಕಳನ್ನು ಬಹುಮುಖ ಚಟುವಟಿಕೆಗಳಲ್ಲಿ ತೊಡಗಿಸುವುದರ ಮೂಲಕ ನಾಗರಿಕ ಪ್ರಜ್ಞೆಯನ್ನು ಬೆಳೆಸಲು ವಿವಿಧ ವಿಷಯಗಳಲ್ಲಿ ವಿದ್ಯಾರ್ಥಿಗಳಿಗಾಗಿ 10 ಸ್ವಯಂ ವಿವರಣಾತ್ಮಕ ಮಾಡ್ಯೂಲ್‌ಗಳನ್ನು ಹಾಗೂ ಶಿಕ್ಷಕರಿಗೆ ಮಾರ್ಗದರ್ಶಿ ಕೈಪಿಡಿಯನ್ನು ಸಿದ್ಧಪಡಿಸಲಾಗಿದೆ.

ಈ ಕುರಿತು ಜಿಲ್ಲಾ, ಬ್ಲಾಕ್ ಹಾಗೂ ಕ್ಲಸ್ಟರ್ ಮಟ್ಟದಲ್ಲಿ ನಡೆಸಲಾಗುವ ಮುಖ್ಯಶಿಕ್ಷಕರು ಹಾಗೂ ಶಿಕ್ಷಕರ ಸಭೆಗಳಲ್ಲಿ ಮತ್ತು ಪ್ರಗತಿ ಪರಿಶೀಲನಾ ಸಭೆಗಳಲ್ಲಿ ಅಗತ್ಯ ಮಾರ್ಗದರ್ಶನ ನೀಡುವುದು. ಉಲ್ಲೇಖ-2 ರಂತೆ ವಿದ್ಯಾರ್ಥಿ ಚಟುವಟಿಕೆ ಪುಸ್ತಕ ಹಾಗೂ ಶಿಕ್ಷಕರ ಕೈಪಿಡಿಯನ್ನು DSERT ವೆಬ್ ಸೈಟ್‌ನಲ್ಲಿ (https://dsert.karnataka.nic.in) ಅಪ್ಲೋಡ್ ಮಾಡಿದ್ದು, ಸದರಿ ಕಲಿಕಾ ಸಾಮಗ್ರಿಗಳನ್ನು ಉಪಯೋಗಿಸುವಂತೆ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಎಲ್ಲಾ ಶಿಕ್ಷಕರಿಗೆ ಮಾಹಿತಿ ಒದಗಿಸುವುದು.

**'ಸಂಭ್ರಮ ಶನಿವಾರ' ದಿನದಂದು** ಜಿಲ್ಲಾ ಹಂತ ಮತ್ತು ಬ್ಲಾಕ್ ಹಂತದ ಎಲ್ಲಾ ಅಧಿಕಾರಿಗಳು ಹಾಗೂ CRP ಗಳು ಕಡ್ಡಾಯವಾಗಿ ಶಾಲೆಗಳಿಗೆ ಭೇಟಿ ನೀಡಿ ಅನುಪಾಲಿಸುವುದು ಹಾಗೂ ಅಗತ್ಯ ಮಾರ್ಗದರ್ಶನ ನೀಡುವುದು. ಕಾರ್ಯಕ್ರಮದ ಯಶಸ್ಸಿಗೆ ತಮ್ಮೆಲ್ಲರ ಪಾಲ್ಗೊಳ್ಳುವಿಕೆಯನ್ನು ಅಪೇಕ್ಷಿಸಲಾಗಿದೆ. 2023-24 ನೇ ಶೈಕ್ಷಣಿಕ ಸಾಲಿನ **'ಸಂಭ್ರಮ ಶನಿವಾರ'** ಆಚರಣೆಗೆ ಸಂಬಂಧಿಸಿದ ಜಿಲ್ಲಾ ಹಂತದ ಕ್ರೂಢೀಕೃತ ವರದಿಯನ್ನು ಮಾಹೆವಾರು ಸಿದ್ಧಪಡಿಸಿ DSERT ಕಛೇರಿಯ ಇ.ವಿ.ಜಿ ಶಾಖೆಯ evg.kardsert1@gmail.com ಮೇಲ್ ಗೆ ಸಲ್ಲಿಸುವುದು.

Signed by Sumangala V
Date: 04-07-2023 17:07:18
ನಿರ್ದೇಶಕರು
ಡಿ.ಎಸ್.ಇ.ಆರ್.ಟಿ, ಬೆಂಗಳೂರು

ಗೆ,

1. ರಾಜ್ಯದ ಎಲ್ಲಾ ಡಯಟ್ ಪ್ರಾಂಶುಪಾಲರಿಗೆ ಅಗತ್ಯ ಕ್ರಮಕ್ಕಾಗಿ.
2. ಉಪ ನಿರ್ದೇಶಕರು (ಆಡಳಿತ) ರವರ ಮುಖಾಂತರ ರಾಜ್ಯದ ಎಲ್ಲಾ BEO ಮತ್ತು BRC ಗಳಿಗೆ ಅಗತ್ಯ ಕ್ರಮಕ್ಕಾಗಿ.
3. ಕಛೇರಿ ಪ್ರತಿ.

I/13022/2023

**ಪ್ರತಿಯನ್ನು**

1. ಮಾನ್ಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕರ್ನಾಟಕ ಸರ್ಕಾರ ರವರಿಗೆ ವಂದನಾಪೂರ್ವಕವಾಗಿ ಸಲ್ಲಿಸುತ್ತಾ, ಸದರಿ ವಿಚಾರವನ್ನು ಮಾನ್ಯ ಶಿಕ್ಷಣ ಸಚಿವರ ಅವಗಾಹನೆಗೆ ತರಲು ಕೋರಿದೆ.

2. ಶ್ರೀ ಎಸ್ ಸುರೇಶ್ ಕುಮಾರ್, ಮಾನ್ಯ ಶಾಸಕರು ಹಾಗೂ ಮಾಜಿ ಸಚಿವರು ರಾಜಾಜಿನಗರ ವಿಧಾನಸಭಾ ಕ್ಷೇತ್ರ ರವರಿಗೆ ವಂದನಾಪೂರ್ವಕವಾಗಿ ಮಾಹಿತಿಗಾಗಿ.

3. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ವಂದನಾಪೂರ್ವಕವಾಗಿ ಮಾಹಿತಿಗಾಗಿ.